Divisional Goods and Service Tax Office-6 * Bangalore-58

ಕರ್ನಾಟಕ ಸರ್ಕಾರ

(ವಾಣಿಜ್ಯ ತೆರಿಗೆಗಳ ಇಲಾಖೆ)

ಸಂಖ್ಯೆ: ವಾತೆಜಂಆ(ಆ)/ವಿಸ&ಸೇತೆಕ-6/
ಸಿಆರ್-05/2018-19

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ)
ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-6,
ಕೆ.ಐ.ಎ.ಡಿ.ಬಿ.ಕಟ್ಟಡ, 'ಬಿ' ಬ್ಲಾಕ್, 3ನೇ ಮಹಡಿ,
4ನೇ ಫೇಸ್, ಪೀಣ್ಯ 2ನೇ ಹಂತ, ಬೆಂಗಳೂರು-58,
ದೂ.ಸಂ.: 080-28363426 ದಿನಾಂಕ: 17.09.2018.

## ಟೆಂಡರ್ ಪ್ರಕಟಣೆ

ವಾಣಿಜ್ಯ ತೆರಿಗೆ ಇಲಾಖೆಯ ಉಪಯೋಗಕ್ಕಾಗಿ ಸ್ವಂತ ವಾಹನಗಳನ್ನು ಹೊಂದಿರುವ ಹಾಗೂ ತಾವೇ ಆ ವಾಹನಕ್ಕೆ ಚಾಲಕರಾಗಿರುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ನಿಗದಿ ಪಡಿಸಿದ ಎಲ್ಲ ದಾಖಲಾತಿಗಳೊಂದಿಗೆ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-6, 3ನೇ ಮಹಡಿ, ಪೀಣ್ಯ, ಬೆಂಗಳೂರು ರವರ ಕಚೇರಿಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ನಿಯಮಗಳನ್ವಯ **2014ರ ಮತ್ತು ನಂತರದ** ಮಾದರಿಯ ಹಳದಿ ಬಣ್ಣದ ಬೋರ್ಡ್ ಹೊಂದಿರುವ ಟ್ಯಾಕ್ಸಿ (ಟಾಟಾ ಇಂಡಿಕ/ವಿಸ್ಟಾ, ಮಾರುತಿ ಸ್ವಿಫ್ಟ್, ಟೊಯೊಟಾ ಲಿವಾ ಹಾಗೂ ಇತರೆ ಹ್ಯಾಚ್‌ಬ್ಯಾಕ್‌ವುಳ್ಳ) ವಾಹನಗಳ ಸೇವೆಯನ್ನು ಮಾತ್ರ ಪಡೆಯಲಾಗುವುದು ಹಾಗೂ **ದಿನಾಂಕ: 01-10-2018 ರಿಂದ ಅನ್ವಯವಾಗುವಂತೆ ಈ ಹಿಂದೆ ಸತತವಾಗಿ ಐದು ವರ್ಷಗಳ ಕಾಲ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಯಾವುದೇ, ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಬಾಡಿಗೆ ಆಧಾರದ ಮೇಲೆ ಪಡೆಯಲು ಅರ್ಹರಿರುವುದಿಲ್ಲ.** ವಾಹನ ಮಾಲೀಕ/ಚಾಲಕರಿಗೆ ಮಾಸಿಕ ರೂ.25,000/- ಗರಿಷ್ಠ ಮೊತ್ತವಾಗಿರುತ್ತದೆ. ಸದರಿ ಟೆಂಡರ್‌ನ ಅವಧಿಯು ದಿನಾಂಕ: 01-10-2018 ರಿಂದ 30-09-2019 ರವರೆಗೆ ಮಾತ್ರ. ಈ ಕಚೇರಿ ಕಾರ್ಯವ್ಯಾಪ್ತಿಯ ಬೆಂಗಳೂರು ನಗರ-11, ತಿಪಟೂರು-1, ಮಧುಗಿರಿ-1 & ತುಮಕೂರು-3 ಒಟ್ಟು 16 ವಾಹನಗಳ ಅವಶ್ಯಕತೆ ಇರುತ್ತದೆ. ಟೆಂಡರಿನ ಇತರೆ ನಿಬಂಧನೆಗಳನ್ನು ಈ ಕೆಳಗೆ ಸಹಿಮಾಡಿರುವವರ ಕಚೇರಿಯಿಂದ ಪಡೆಯಬಹುದಾಗಿರುತ್ತದೆ. (ದೂರವಾಣಿ ಸಂಖ್ಯೆ:080-28363426)

ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 26-09-2018 ಸಂಜೆ: 5.00 ಗಂಟೆಯೊಳಗೆ

ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು
ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-6
ಬೆಂಗಳೂರು-560 058.

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ),
ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-6,ಬೆಂ.

Divisional Goods and Serv...
Bangalore-58

ಕರ್ನಾಟಕ ಸರ್ಕಾರ
(ವಾಣಿಜ್ಯ ತೆರಿಗೆಗಳ ಇಲಾಖೆ)

ಸಂಖ್ಯೆ: ವಾತೆಜಂಆ(ಆ)/ವಿಸ&ಸೇತೆಕ-6/
ಸಿಆರ್-05/2018-19

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ)
ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-6,
ಕೆ.ಐ.ಎ.ಡಿ.ಬಿ.ಕಟ್ಟಡ, 'ಬಿ' ಬ್ಲಾಕ್, 3ನೇ ಮಹಡಿ,
ಪೀಣ್ಯ 2ನೇ ಹಂತ, ಬೆಂಗಳೂರು-58,
ದೂ.ಸಂ:080-28363426.ದಿನಾಂಕ: 17.09.2018

## ಟೆಂಡರ್ ಪ್ರಕಟಣೆ

ವಿಷಯ: ಸಾಮಾನ್ಯ ಟೆಂಡರ್ ಪ್ರಕಟಣೆಯ ಮುಖೇನ ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಸೇವೆಯನ್ನು ಒದಗಿಸುವ ಕುರಿತು.

ಉಲ್ಲೇಖ: 1. ಮಾನ್ಯ ವಾಣಿಜ್ಯ ತೆರಿಗೆಗಳ ಆಯುಕ್ತರವರ ಸುತ್ತೋಲೆ ಸಂಖ್ಯೆ: ವಿಹೆಚ್‌ಟಿ/ಸಿಆರ್-07/2018-19 ದಿನಾಂಕ:14.08.2018

*******

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-06, 3ನೇ ಮಹಡಿ, ಪೀಣ್ಯ, ಬೆಂಗಳೂರು-58 ರವರ ವಿಭಾಗದ ಕಚೇರಿಯ ಉಪಯೋಗಕ್ಕಾಗಿ 16 ಖಾಸಗಿ ವಾಹನಗಳನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯಲು ಉಲ್ಲೇಖಿತ ಮಾನ್ಯ ಆಯುಕ್ತರವರ ಪತ್ರದಲ್ಲಿ ಅನುಮತಿಯನ್ನು ನೀಡಲಾಗಿರುತ್ತದೆ.

ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳನ್ನು ಹೊಂದಿರುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಆಸಕ್ತಿಯುಳ್ಳವರು ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

1. **ಅರ್ಜಿ ಸಲ್ಲಿಸುವ ವಿಧ** : ದ್ವಿ-ಲಕೋಟೆ ಪದ್ಧತಿ
2. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** : 26-09-2018 ಸಂಜೆ 5.00 ಗಂಟೆ
3. **ಟೆಂಡರ್ ತೆರೆಯುವ ದಿನಾಂಕ** : 27-09-2018 ಬೆಳಿಗ್ಗೆ 11.00 ಗಂಟೆ
4. **ವಾಹನದ ಮಾದರಿ:** * **2014 ಮತ್ತು ನಂತರದ್ದಾಗಿರತಕ್ಕದ್ದು**

   * **ದಿನಾಂಕ: 01-10-2018 ರಿಂದ ಅನ್ವಯವಾಗುವಂತೆ ಈ ಹಿಂದೆ ಸತತವಾಗಿ ಐದು ವರ್ಷಗಳ ಕಾಲ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಯಾವುದೇ, ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಬಾಡಿಗೆ ಆಧಾರದ ಮೇಲೆ ಪಡೆಯಲು ಅರ್ಹರಿರುವುದಿಲ್ಲ.**

Divisional Goods and Service Tax Office-6 * Bangalore-58 *

* ಪ್ರತಿ ವಾಹನದ ಗುಣಮಟ್ಟವನ್ನು ಹಾಗೂ ಚಾಲನ ಕೌಶಲ್ಯವನ್ನು ಪರಿಶೀಲಿಸಿ ನಂತರವೇ ವಾಹನಗಳನ್ನು ತೆಗೆದುಕೊಳ್ಳಲಾಗುವುದು.

5. **ಮಾಸಿಕ ಬಾಡಿಗೆಯ ಗರಿಷ್ಠ ಮೊತ್ತ:**
   * ಮಾಸಿಕ ಬಾಡಿಗೆಯ ಗರಿಷ್ಠ ಮೊತ್ತ ರೂ.25000/–
   * ಕನಿಷ್ಠ ದರವನ್ನು ಸೂಚಿಸಿದ ವಾಹನ ಚಾಲಕರನ್ನು ಆಯ್ಕೆಗೆ ಪರಿಗಣಿಸಲಾಗುವುದು.

6. **ವಾಹನದ ಗುತ್ತಿಗೆ ಸೇವಾ ಅವಧಿ:** ವಾಹನಗಳನ್ನು ಬಾಡಿಗೆ ಆಧಾರದ ಮೇಲೆ ಈ ವಿಭಾಗಕ್ಕೆ ಒದಗಿಸುವ ಕಾಲಮಿತಿಯು ದಿನಾಂಕ 01–10–2018 ರಿಂದ 30–09–2019 ರವರೆಗೆ ಇರುತ್ತದೆ. ಅಗತ್ಯವಿದ್ದರೆ ಇವೆ ಷರತ್ತು ಮತ್ತು ನಿಬಂದನೆಗಳಿಗೆ ಒಳಪಟ್ಟು ಅಥವಾ ಇನ್ನೂ ಹೆಚ್ಚಿನ ಷರತ್ತುಗಳ ಜೊತೆಗೆ ಇಂದು ತ್ರೈಮಾಸಿಕದ ಅವಧಿಗೆ ವಾಹನ ಮಾಲೀಕರು ಮತ್ತು ಈ ಇಲಾಖೆಯ ಆಯುಕ್ತರ ಲಿಖಿತ ಇಚ್ಚೆಯ ಮೇರೆಗೆ ಮುಂದುವರಿಸಬಹುದಾಗಿದೆ. ಇದಕ್ಕೂ ಮೊದಲು ಸಹ ಕರಾರು ರದ್ದುಗೊಳಿಸುವ ಹಕ್ಕು ಮಾನ್ಯ ಆಯುಕ್ತರು/ಜಂಟಿ ಆಯುಕ್ತರವರದ್ದಾಗಿರುತ್ತದೆ.

7. **ಅರ್ಜಿದಾರರ ವೈಯಕ್ತಿಕ ವಿವರಗಳು:**

- **ಅರ್ಜಿದಾರರ ಹೆಸರು:** ಅರ್ಜಿದಾರರ ಹೆಸರು ದಪ್ಪ ಅಕ್ಷರಗಳಲ್ಲಿ ಅರ್ಜಿದಾರರ ವಿಳಾಸ ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಎರಡು ಭಾವಚಿತ್ರಗಳು.
- **ವಿಳಾಸದ ದಾಖಲೆಗಳು:** ಮತದಾರರ ಗುರುತಿನ ಚೀಟಿ/ರೇಷನ್ ಕಾರ್ಡ್/ಆಧಾರ್ ಕಾರ್ಡ್/ಪಾಸ್ ಪೋರ್ಟ್ ಅಥವಾ ಇತರೆ ಭಾವ ಚಿತ್ರ ಹೊಂದಿರುವ ಚುನಾವಣಾ ಗುರುತಿನ ಚೀಟಿ ಹಾಗೂ ಖಾಯಂ ವಿಳಾಸ ದಾಖಲೆ.
- **ಬ್ಯಾಂಕ್ ಖಾತೆಯ ವಿವರಗಳು:** ಉಳಿತಾಯ ಖಾತೆ ಹೊಂದಿರುವ ಬ್ಯಾಂಕಿನ ಹೆಸರು, ವಿಳಾಸ, ಉಳಿತಾಯ ಖಾತೆಯ ಸಂಖ್ಯೆ ಹಾಗು ಚೆಕ್ಕಿನ ಪ್ರತಿ.
- **ಇತರೆ ದಾಖಲಾತಿಗಳು:** ಕಡ್ಡಾಯವಾಗಿ ಪಾನ್‌ಕಾರ್ಡ್ ಮತ್ತು ಆಧಾರ್ ಕಾರ್ಡ್‌ನ ಪ್ರತಿಗಳು ಹಾಗೂ ಮಾಲೀಕರಿಗೆ ಸಂಬಂಧಿಸಿದಂತೆ ಡ್ರೈವಿಂಗ್ ಲೈಸೆನ್ಸ್ ಚಾಲಕರ ದೈಹಿಕ ಸಾಮರ್ಥ್ಯ ಪ್ರಮಾಣ ಪತ್ರ.

8. **ಖಾಸಗೀ ವಾಹನಕ್ಕೆ ಸಂಬಂಧಿಸಿದ ದಾಖಲಾತಿಗಳು:**

- ವಾಹನದ ನೋಂದಣಿ ಮಸ್ತಕದ ಪ್ರತಿ.
- ವಾಹನದ ವಿಮಾ ಪಾಲಿಸಿಯ ಪ್ರತಿ
- ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನ ಚಾಲನಾ ಪರವಾನಗಿ ಪ್ರತಿ.
- ರಸ್ತೆ ತೆರಿಗೆಯನ್ನು (Road Tax) ಸಂಬಂಧಿಸಿದ ಇಲಾಖೆಗೆ ಪಾವತಿಸಿರುವ ವಿವರದ ಪ್ರತಿ.
- ವಾಯು ಮಾಲಿನ್ಯ ಇಲಾಖೆಯವರು ನೀಡುವ ಪ್ರಮಾಣ ಪತ್ರ.

9. **ಟೆಂಡರ್ ಪ್ರಕಟಣೆಯ ಷರತ್ತು ಮತ್ತು ನಿಬಂಧನೆಗಳು**

- ಈ ಟೆಂಡರ್ ಅಧಿಸೂಚನೆಯಲ್ಲಿ ಇರುವ ಷರತ್ತುಗಳಲ್ಲದೇ ಸುಗಮ ಸೇವೆಯ ನಿರ್ವಹಣೆಗಾಗಿ ಬೇಕಾಗುವ ಇತರೆ ಯಾವುದೇ ಷರತ್ತುಗಳನ್ನು ವಿಧಿಸುವ ಅಧಿಕಾರವನ್ನು ವಾಣಿಜ್ಯ ತೆರಿಗೆಗಳ ಇಲಾಖೆಯ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ) ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ–06 ಪೀಣ್ಯ ಬೆಂಗಳೂರು–58 ಇವರು ಹೊಂದಿರುತ್ತಾರೆ.

* ಮೇಲ್ಕಂಡ ವಿವರಗಳು ಹಾಗೂ ಎಲ್ಲಾ ದಾಖಲಾತಿಗಳ ಪ್ರತಿಗಳನ್ನು ಸೀಲು ಮಾಡಿದ ಲಕೋಟೆಯಲ್ಲಿಟ್ಟು, ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ ಮಾಲೀಕರೇ ಚಾಲಕರಾಗಿರುವ ವಾಹನ ಮಾಲೀಕರ ಹೊರಗುತ್ತಿಗೆ ಸೇವೆ ಎಂದು ನಮೂದಿಸುವುದು.
* ಪೂರ್ಣ ವಿವರಗಳು ಹಾಗೂ ಮೇಲ್ಕಂಡ ದಾಖಲಾತಿಗಳನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
* ಅರ್ಜಿಯನ್ನು ಖುದ್ದಾಗಿ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರವರ ಕಚೇರಿ(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ–06, ಪೀಣ್ಯ 2ನೇ ಹಂತ, ಬೆಂಗಳೂರು–58 ಇವರ ಶಾಖೆಯಲ್ಲಿ ಅರ್ಜಿಯನ್ನು ಸಲ್ಲಿಸುವುದು.
* ಅರ್ಜಿಯನ್ನು ಸಲ್ಲಿಸಿರುವುದಕ್ಕೆ ಸ್ವೀಕೃತಿ ಪಡೆಯುವುದು ಹಾಗೂ ಕಾರ್ಯ ನಿರ್ವಹಣೆಯಲ್ಲಿ ಪಾಲಿಸಬೇಕಾದ ನಿಯಮಗಳು/ಷರತ್ತುಗಳ ವಿವರಗಳ ಪಟ್ಟಿ ಅನ್ವಯ ಕಡ್ಡಾಯವಾಗಿ ನಿಯಮಗಳನ್ನು ಅರ್ಹಗೊಳ್ಳುವ ವಾಹನ ಮಾಲೀಕರು ಕಡ್ಡಾಯವಾಗಿ ಪಾಲಿಸತಕ್ಕದ್ದು.
* ಅರ್ಹಗೊಂಡು ಆಯ್ಕೆಯಾದ ವಾಹನ ಮಾಲೀಕರು ತಮಗೆ ನೀಡಿದ ಕಾರ್ಯಾದೇಶದಂತೆ ಕಾರ್ಯನಿರ್ವಹಿಸದಿದ್ದಲ್ಲಿ ಇವರ ಸೇವೆಯನ್ನು ಯಾವುದೇ ಮುನ್ಸೂಚನೆ ಇಲ್ಲದೇ ರದ್ದು ಪಡಿಸುವ ಅಧಿಕಾರವನ್ನು ವಾಣಿಜ್ಯ ತೆರಿಗೆಗಳ ಇಲಾಖೆಯ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ–06, ಬೆಂಗಳೂರು–58 ರವರು ಹೊಂದಿರುತ್ತಾರೆ.
* ಅನಾರೋಗ್ಯವೂ ಸೇರಿದಂತೆ ಅನಿವಾರ್ಯ ಸಂದರ್ಭಗಳಲ್ಲಿ ತಿಂಗಳಲ್ಲಿ **ಎರಡು ದಿನ ಮಾತ್ರ** ಕಚೇರಿ ಮುಖ್ಯಸ್ಥರಿಂದ/ಹಂಚಿಕೆಯಾದ ಅಧಿಕಾರಿಯವರಿಂದ ಅಥವಾ ವಾಹನ ಉಪಯೋಗಿಸುವ ಕಚೇರಿಯ ಅಧಿಕಾರಿಯವರಿಂದ ಅನುಮತಿ ಪಡೆದು ಮಾಲೀಕ–ಚಾಲಕರು ರಜೆ ಪಡೆಯಬಹುದು. ಆ ಅವಧಿಯಲ್ಲಿ ಬದಲಿ ವಾಹನದ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಲೇಬೇಕು. ಈ ಬದಲಿ ವ್ಯವಸ್ಥೆಯು ರಜೆ ಅವಧಿಗೆ ಪೂರ್ಣಪ್ರಮಾಣದಲ್ಲಿ ಇರತಕ್ಕದ್ದು. ಇಲ್ಲದಿದ್ದರೆ, ಗೈರುಹಾಜರಿ ದಿವಸ ಎಂದು ಪರಿಗಣಿಸಿ ಬಾಡಿಗೆ ಕಡಿತಗೊಳಿಸಲಾಗುವುದು. ಜೊತೆಗೆ ಸಾರ್ವತ್ರಿಕ ರಜೆ ದಿನಗಳಲ್ಲಿ ಅಗತ್ಯ ಬಿದ್ದಾಗ ತುರ್ತು ಕೆಲಸಗಳ ಸಂದರ್ಭಗಳಲ್ಲಿ ವಾಹನ ಚಾಲಕರು ಹೆಚ್ಚುವರಿ ಬಾಡಿಗೆಯನ್ನು ನಿರೀಕ್ಷಿಸದೆ ಕಚೇರಿ ಕರ್ತವ್ಯ ನಿರ್ವಹಿಸಲು ಸಿದ್ಧರಿರಬೇಕು.
* ಮಾಸಿಕ ಬಾಡಿಗೆ ಆಧಾರದ ಮೇಲೆ ಹಾಗೂ ಆದೇಶದಲ್ಲಿನ ದರಪಟ್ಟಿಗೆ ಒಳಪಟ್ಟು ಮಾತ್ರ ವಾಹನಗಳನ್ನು ಬಾಡಿಗೆಗೆ ಪಡೆಯಲಾಗುತ್ತದೆ.
* ಮಾಲೀಕ–ಚಾಲಕರು ಕಟ್ಟುನಿಟ್ಟಾಗಿ ಸಮಯಪಾಲನೆ ಮಾಡತಕ್ಕದ್ದು. ಕಚೇರಿ ಅಧಿಕಾರಿಗಳು ಸಂಬಂಧಿಸಿದಂತೆ ಎಲ್ಲಾ ಕಚೇರಿ ಕಾರ್ಯ ನಿರ್ವಹಣೆಗೆ ಕಾಲಮಿತಿಯ ನಿರ್ಬಂದವಿಲ್ಲದೆ ನಿರ್ವಹಿಸತಕ್ಕದ್ದು.ವಾಹನ ಉಪಯೋಗಿಸುವ ಕಚೇರಿಯ ಮುಖ್ಯಸ್ಥರು /ಹಂಚಿಕೆಯಾದ ಅಧಿಕಾರಿಯವರಿಂದ ಈ ಕುರಿತು ದೂರುಗಳು ಬಂದಲ್ಲಿ ಅಂತಹ ವಾಹನ ಬಳಕೆಯನ್ನು ತಕ್ಷಣ ನಿಲ್ಲಿಸುವ ಅಥವಾ ಒಪ್ಪಂದವನ್ನು ರದ್ದುಪಡಿಸುವ ಅಧಿಕಾರ ಜಂಟಿ ಆಯುಕ್ತರವರು ಹೊಂದಿರುತ್ತಾರೆ.